3	ಬಂಟ್ವಾಳ	859	757	277	449	69	2411
4	ಪುತ್ತೂರು	509	568	207	320	134	1738
5	ಸುಳ್ಯ	297	318	93	225	83	1016
6	ಪಳ್ತಂಗಡಿ	608	554	216	394	136	19083
	ಒಟ್ಟು	**3160**	**3066**	**1162**	**2126**	**624**	**10138**

563 ಶ್ರೀ ಶ್ರೀನಿವಾಸ್ (ವಾಸು) ಎಸ್.ಆರ್. (ಗುಬ್ಬಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಮಕೂರು ಜಿಲ್ಲೆ ಗುಬ್ಬಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಬರುವ ಅಂಕಸಂದ್ರ ಮತ್ತು ಎಂ.ಎಂ.ಎ. ಕಾವಲ್ ಗ್ರಾಮಗಳಿಗೆ ಸರ್ಕಾರಿ ಪ್ರಾಥಮಿಕ ಆಸ್ಪತ್ರೆಗಳು ಮಂಜೂರಾಗಿರುವುದು ನಿಜವೇ;

ಆ) ಆಸ್ಪತ್ರೆಗಳ ನಿರ್ಮಾಣಕ್ಕಾಗಿ ಸರ್ಕಾರ ಜಮೀನನ್ನು ಸ್ವಾಧೀನಪಡಿಸಿಕೊಂಡಿದೆಯೇ; ಹಾಗಿದ್ದಲ್ಲಿ, ಆಸ್ಪತ್ರೆಗಳ ಕಟ್ಟಡದ ಕಾಮಗಾರಿಯನ್ನು ಇದುವರೆವಿಗೂ ಕೈಗೊಳ್ಳದಿರಲು ಕಾರಣಗಳೇನು?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ತುಮಕೂರು ಜಿಲ್ಲೆ ಗುಬ್ಬಿ ತಾಲ್ಲೂಕಿನ ಅಂಕಸಂದ್ರ ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸ್ಥಾಪಿಸಲು 2007 ರಲ್ಲಿ ಮಂಜೂರಾತಿ ನೀಡಲಾಗಿತ್ತು. ಒಂದು ವರ್ಷದ ಅವಧಿಯೊಳಗೆ ಕಟ್ಟಡ ಸಲುವಾಗಿ ಉಚಿತ ನಿವೇಶನ ಹಾಗೂ ರೂ.1 ಲಕ್ಷ ವಂತಿಕೆ ನೀಡಬೇಕೆಂದು ಷರತ್ತು ವಿಧಿಸಲಾಗಿತ್ತು. ಸದರಿ ಷರತ್ತುಗಳನ್ನು ಪೂರೈಸಿರುವುದಿಲ್ಲ. ಎಂ.ಎಂ.ಎ ಕಾವಲ್ ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸ್ಥಾಪಿಸಲು ಪ್ರಸ್ತಾವನೆ ಬಂದಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

554 ಶ್ರೀ ಸುಭಾಷ ಆರ್. ಗುತ್ತೇದಾರ್ (ಆಳಂದ್) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಲ್ಬರ್ಗಾ ಜಿಲ್ಲೆ ಆಳಂದ ತಾಲ್ಲೂಕಿನಲ್ಲಿರುವ ಸಮುದಾಯ ಆರೋಗ್ಯ ಕೇಂದ್ರಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು ಪ್ರಾಥಮಿಕ

ಆರೋಗ್ಯ ಘಟಕಗಳ ಸಂಖ್ಯೆ ಎಷ್ಟು; ಗ್ರಾಮವಾರು ವಿವರಗಳನ್ನು ನೀಡುವುದು;

ಆ) ಸದರಿ ಆಸ್ಪತ್ರೆಗಳಲ್ಲಿ ವೈದ್ಯರ ಮತ್ತು ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಎಷ್ಟು ಸಿಬ್ಬಂದಿಗಳ ಕೊರತೆ ಇದೆ; ಪೂರ್ಣ ಮಾಹಿತಿ ನೀಡುವುದು;

ಈ) ಈ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಉ) ಈ ರೀತಿಯ ಸಿಬ್ಬಂದಿ ಕೊರತೆಯಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಊ) ಹಾಗಿದ್ದಲ್ಲಿ, ಈ ಕೊರತೆಯನ್ನು ನೀಗಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಸಮುದಾಯ ಆರೋಗ್ಯ ಕೇಂದ್ರಗಳು – 3
ಪ್ರಾಥಮಿಕ ಆರೋಗ್ಯ ಕೇಂದ್ರಗಳು – 14
ಪ್ರಾಥಮಿಕ ಆರೋಗ್ಯ ಘಟಕಗಳು – ಇರುವುದಿಲ್ಲ.

ತಾಲ್ಲೂಕು ಆಸ್ಪತ್ರೆ	ಅಳಂದ
ಸಮುದಾಯ ಆರೋಗ್ಯ ಕೇಂದ್ರಗಳು	1. ಮದನಹಿಪ್ಪರಗಿ 2. ನರೋಣ 3. ನಿಂಬರಗ
ಪ್ರಾಥಮಿಕ ಆರೋಗ್ಯ ಕೇಂದ್ರ	1. ಹಂಬಳಗಿ 2. ಬೂಸನೂರು 3. ಬಿಡಗ 4. ದಂಗಾಪುರ 5. ಈಲಲ್ಲಿ 6. ಗೋಲಿ. ಬಿ 7. ಕಡಗಂಚಿ

	8. ಕಾಜೂರಿ 9. ಕೋರಳ್ಳಿ 10. ತಡಕಲ್ 11. ವಿ.ಕೆ. ಸಲಗೆರೆ 12. ಕೆನ್ನಿ ಸುಲ್ತಾನಾ 13. ಮೆಡಿಯಾಳ್ 14. ಸರಸಾಂಬ
ಪ್ರಾಥಮಿಕ ಆರೋಗ್ಯ ಘಟಕಗಳು	ಯಾವುದು ಇರುವುದಿಲ್ಲ

ಆ) ಬಂದಿದೆ.

ಇ)

ಮಂಜೂರಾದ ಹುದ್ದೆಗಳು	ಹುದ್ದೆಗಳು	ಕಾರ್ಯನಿರತ	ಖಾಲಿ
ವೈದ್ಯಾಧಿಕಾರಿಗಳು	31	24	7
'ಸಿ' ವೃಂದ ಸಿಬ್ಬಂದಿ	214	157	57
'ಡಿ' ವರ್ಗ ಸಿಬ್ಬಂದಿ	65	51	14

ಈ) ಇಲಾಖೆಯಲ್ಲಿ ಖಾಲಿ ಇರುವ 562 ವೈದ್ಯಾಧಿಕಾರಿಗಳ ಹುದ್ದೆಗಳನ್ನು ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ ಭರ್ತಿ ಮಾಡಲು ಪ್ರಸ್ತಾವನೆ ಸಲ್ಲಿಸಲಾಗಿದೆ. ಖಾಲಿ ಇರುವ 5021 ಅರೆ ವೈದ್ಯಕೀಯ ವೃಂದದ ವಿವಿಧ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ. ಇದಲ್ಲದೇ 224 ಪ್ರಥಮ ದರ್ಜೆ ಸಹಾಯಕರ ಹುದ್ದೆಗಳನ್ನು ತುಂಬಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ನೇಮಕಾತಿ ಪ್ರಕ್ರಿಯೆ ಮುಗಿದ ನಂತರ ಆದ್ಯತೆ ಮೇರೆಗೆ ಖಾಲಿ ಇರುವ ಹುದ್ದೆಗಳನ್ನು ತುಂಬಲಾಗುವುದು. ಗ್ರೂಪ್ 'ಡಿ' ವರ್ಗದ ಸಿಬ್ಬಂದಿಯನ್ನು ಹೊರ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

ಉ) ಬಂದಿದೆ.

ಊ) ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ವೈದ್ಯಾಧಿಕಾರಿ ಹುದ್ದೆಗಳಿಗೆ ಎರವಲು ಸೇವೆ ಮೇಲೆ ಪಾರಕ್ಕೆ ಮೂರು ಬಾರಿ ಚಿಕಿತ್ಸೆ ನೀಡಲು ಸಮೀಪದ ಕೇಂದ್ರಗಳಿಂದ ತಾತ್ಕಾಲಿಕವಾಗಿ ನಿಯೋಜಿಸ ಲಾಗಿದೆ.

541 ಶ್ರೀ ಖಾದರ್ ಯು.ಟಿ. (ಮಂಗಳೂರು) : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2008–09ನೇ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಇಲಾಖಾ ವತಿಯಿಂದ ಕೈಗೊಂಡ ಅಭಿವೃದ್ಧಿ ಕಾಮಗಾರಿಗಳ ವಿವರ ಒದಗಿಸುವುದು (ತಾಲ್ಲೂಕುವಾರು ನೀಡುವುದು)

ಆ) ಇಲಾಖಾ ಯೋಜನೆಗಳನ್ನು ಜಾರಿಗೊಳಿಸಲು ಅಗತ್ಯವಿರುವ ಅನುದಾನವನ್ನು ಬಿಡುಗಡೆ ಮಾಡಿ ಖರ್ಚು ಮಾಡಲಾಗಿದೆಯೇ; ಇಲ್ಲದಿದ್ದಲ್ಲಿ, ಯಾವಾಗ ಈ ಯೋಜನೆಗಳನ್ನು ಪೂರ್ಣಗೊಳಿಸಲಾಗುವುದು?

ಶ್ರೀ ಪಿ.ಎಂ. ನರೇಂದ್ರಸ್ವಾಮಿ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು) :

ಅ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು :

1) 2008–09ನೇ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಸುಳ್ಯದಲ್ಲಿ ಸ್ತ್ರೀಶಕ್ತಿ ಭವನ ನಿರ್ಮಿಸುವ ಕಾಮಗಾರಿ ಕೈಗೊಳ್ಳಲಾಗಿದೆ.
2) ಇಲಾಖಾ ವಂತಿಗೆ ಹಾಗೂ ನಬಾರ್ಡ್ ಸಹಾಯಾನುಧನದಿಂದ ಅಂಗನವಾಡಿ ಕಟ್ಟಡಗಳ ನಿರ್ಮಾಣದ ವಿವರಗಳನ್ನು ಅನುಬಂಧದಲ್ಲಿ ಒದಗಿಸಲಾಗಿದೆ.

ಆ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ :

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಇಲಾಖೆಯ ಮಾರ್ಗಸೂಚಿ ಅನ್ವಯ ತಾಲ್ಲೂಕು ಸ್ತ್ರೀಶಕ್ತಿ ಭವನ ನಿರ್ಮಾಣಕ್ಕಾಗಿ ರೂ.15.00 ಲಕ್ಷಗಳ ಅನುದಾನ ವನ್ನು ಬಿಡುಗಡೆ ಮಾಡಲಾಗಿದೆ. ಸದರಿ ಕಾಮಗಾರಿಗಳನ್ನು ಪ್ರಾರಂಭಿಸಲು ಟೆಂಡರ್ ಕರೆಯಲಾಗಿದ್ದು, 2010–11ರಲ್ಲಿ ಈ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು. ಹಾಗೂ ಇಲಾಖೆಯ ಯೋಜನೆಗಳನ್ನು